ಹಾಸ್ಟೆಲ್ ಕಟ್ಟಡ ಪುನರ್ ನಿರ್ಮಾಣ

827(377); ಶ್ರೀ ಅಖಂಡ ಶ್ರೀನಿವಾಸಮೂರ್ತಿ.ಆರ್. (ಪುಲಿಕೇಶಿನಗರ)

ಅ) ಪುಲಕೇಶಿನಗರ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ವಾರ್ಡ್ ಸಂಖ್ಯೆ 60 ಸಗಾಯಿಪುರ ವಾರ್ಡ್‌ನಲ್ಲಿ ಇರುವ ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್ ಕಟ್ಟಡ ಸಂಪೂರ್ಣವಾಗಿ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:

ಆ) ಬಂದಿದ್ದಲ್ಲಿ, ಈ ಕಟ್ಟಡ ಪುನರ್ ನಿರ್ಮಾಣಕ್ಕೆ ಕೈಗೊಂಡಿರುವ ಕ್ರಮಗಳೇನು(ಪೂರ್ಣ ವಿವರ ನೀಡುವುದು)

ಶ್ರೀ ಹೆಚ್.ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) **ಮತ್ತು** ಆ) ಈ ಕಟ್ಟಡದಲ್ಲಿ ನಡೆಯುತ್ತಿದ್ದ ಸಮಾಜ ಕಲ್ಯಾಣ ಇಲಾಖೆಯ ವಸತಿ ಶಾಲೆಯನ್ನು 2011-12 ನೇ ಸಾಲಿನಲ್ಲಿ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯ. ಯಲಹಂಕ ಕಟ್ಟಡಕ್ಕೆ ಸ್ಥಳಾಂತರಿಸಲಾಗಿದೆ. ಈ ಕಟ್ಟಡವು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸೇರಿರುತ್ತದೆ.

ಟಿ.ಎ.ಪಿ.ಸಿ.ಎಂ.ಎಸ್. ಸೊಸೈಟಿಗಳು

833(839); ಶ್ರೀ ಅರವಿಂದ್ ಚಂದ್ರಕಾಂತ್ ಪಾಟೀಲ್ (ಖಾನಾಪುರ)

ಅ) ಖಾನಾಪುರ ತಾಲ್ಲೂಕಿನ ಟಿಎಪಿಸಿಎಂಎಸ್ ಸೊಸೈಟಿಗಳಲ್ಲಿ ಎಲ್ಲಾ ರೀತಿಯ ಪಡಿತರ ಧಾನ್ಯ, ಆಹಾರ ಭದ್ರತೆ ಕಾಯ್ದೆಗೆ ಸಂಬಂಧಿಸಿದ ಧಾನ್ಯಗಳನ್ನು ಸಾಗಾಣಿಕೆ ಹಾಗೂ ಹಂಚಿಕೆ ಮಾಡುವಲ್ಲಿ ಖಾಸಗಿ ಜನರ ಹಾಗೂ ಸಂಸ್ಥೆಗಳ ಮೇಲೆ ಕಡಿವಾಣ ಹಾಕಲು ಸರ್ಕಾರ ಕೈಗೊಂಡ ಕ್ರಮಗಳೇನು (ವಿವರ ನೀಡುವುದು)?